# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ

## (ಮುಂದುವರೆದ ಉಪವೇಶನಗಳು)

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ: 21ನೇ ಜೂನ್, 2017**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ಕಾರ್ಯದರ್ಶಿಯವರ ವರದಿ

ಘನತೆವೆತ್ತ ರಾಷ್ಟ್ರಪತಿಯವರಿಂದ ಒಪ್ಪಿಗೆ ಪಡೆದ ವಿಧೇಯಕದ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಅ) ಶ್ರೀ ಸಿದ್ಧರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-**

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2017ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಕರ್ನಾಟಕದಲ್ಲಿನ ರಾಷ್ಟ್ರೀಯ ಉದ್ಯಾನವನಗಳು ಮತ್ತು ವನ್ಯಜೀವಿಧಾಮಗಳ ಆಡಳಿತ ನಿರ್ವಹಣೆ ಮೇಲಿನ ವರದಿಯನ್ನು (ಸಂಖ್ಯೆ-6) ಸಭೆಯ ಮುಂದಿಡುವುದು.

**ಆ)** (ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂಭತ್ತನೆಯ ಪಟ್ಟಿಯ ರೀತ್ಯಾ)

**ಕಾರ್ಯದರ್ಶಿಯವರು:**

**ಇ)** ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು:-

1) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2017
2) ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ವಿಧೇಯಕ, 2017
3) ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2017
4) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು (ತಿದ್ದುಪಡಿ) ವಿಧೇಯಕ, 2017

## ೦೩. ಚುನಾವಣಾ ಪ್ರಸ್ತಾವ

ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಮಾನ್ಯ ಸಭಾನಾಯಕರು ಪ್ರಸ್ತಾವ ಮಂಡಿಸುವುದು.

## ೦೪. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2017**

**ಶ್ರೀ ಕೆ.ಆರ್.ರಮೇಶ್ ಕುಮಾರ್** (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦೫. ವಿಧಾನ ಮಂಡಲದ ಸಮಿತಿಯ ವರದಿಯ ಮೇಲೆ ಚರ್ಚೆ

**ಶ್ರೀಯುತರುಗಳಾದ: ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ), ಕೆ.ಸಿ. ಕೊಂಡಯ್ಯ ಹಾಗೂ ಅಲ್ಲಂ ವೀರಭದ್ರಪ್ಪ** ಅವರುಗಳು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ೨೦೧೪-೧೫ನೇ ಸಾಲಿನ ಮೂರನೇ ವರದಿಯಲ್ಲಿನ ಶಿಫಾರಸ್ಸುಗಳು ಹಾಗೂ ಅವುಗಳ ಮೇಲೆ ಸರ್ಕಾರ ಕೈಗೊಂಡಿರುವ ಅನುಸರಣಾ ವರದಿಯ ಬಗ್ಗೆ ಪ್ರಸ್ತಾಪಿಸುವುದು ಹಾಗೂ ಸರ್ಕಾರದಿಂದ ಉತ್ತರ.

## ೦೬. ಅರ್ಧಗಂಟೆ ಕಾಲಾವಧಿ ಚರ್ಚೆ

**ಶ್ರೀಮತಿ ತಾರಾಅನೂರಾಧ, ಶ್ರೀ ಅರುಣ ಶಹಾಪುರ, ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಹಾಗೂ ಶ್ರೀ ಎಸ್.ವ್ಹಿ. ಸಂಕನೂರ** ಅವರುಗಳಿಂದ **"ಜಾತಿ ಗಣತಿ ಕಾರ್ಯ ಕುರಿತು"** ದಿನಾಂಕ: ೧೨.೦೬.೨೦೧೭ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: ೨೭೭(೨೭೮೭)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿರುವ ವಿಷಯದ ಬಗ್ಗೆ ಅರ್ಧಗಂಟೆ ಕಾಲಾವಧಿ ಚರ್ಚೆ.

## ೦7. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಬಸವರಾಜ ಹೊರಟ್ಟಿ** ಅವರು 1997ರಲ್ಲಿ ಧಾರವಾಡದಲ್ಲಿ ಪೋಲೀಸರ ಮಕ್ಕಳಗಾಗಿ ಪ್ರಾರಂಭಿಸಿರುವ ವಸತಿ ಸಹಿತ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ಖಾಯಂಗೊಳಸುವ ಬಗ್ಗೆ **ಮಾನ್ಯ ಗೃಹ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯಾದ್ಯಂತ ಲಕ್ಷಾಂತರ ಹೊಲಿಗೆ ವೃತ್ತಿ ಬಾಂಧವರಿಗೆ ಈಗಾಗಲೇ ಜಾರಿಯಲ್ಲಿರುವ 'ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳ' ಮುಖಾಂತರ ಜಾರಿಯಲ್ಲಿರುವ ಭವಿಷ್ಯನಿಧಿ, ಪಿಂಚಣಿ ಮತ್ತು ಎನ್.ಪಿ.ಎಸ್. ಲೈಫ್ ಯೋಜನೆಯನ್ನು ಜಾರಿಗೊಳಸುವ ಬಗ್ಗೆ **ಮಾನ್ಯ ಕಾರ್ಮಿಕ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀಯುತರುಗಳಾದ: ಕೋಟ ಶ್ರೀನಿವಾಸ ಪೂಜಾರಿ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಎಂ.ಕೆ. ಪ್ರಾಣೇಶ್, ಭಾನುಪ್ರಕಾಶ್, ಆರ್. ಪ್ರಸನ್ನಕುಮಾರ್ ಹಾಗೂ ಇತರರುಗಳು** ಗ್ರಾಮ ಪಂಚಾಯತಿಗಳಲ್ಲಿನ ತೆರಿಗೆ ಬಾಕಿ, ಬಾಪೂಜಿ ಸೇವಾ ಕೇಂದ್ರಗಳನ್ನು ಶಕ್ತಿಯುತಗೊಳಸುವುದು, ಸಿಬ್ಬಂದಿಗಳ ವೇತನ ಹಾಗೂ ಪಿ.ಡಿ.ಓ.ಗಳ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಇತ್ಯಾದಿ ವಿಷಯಗಳ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

**ಈ) ಶ್ರೀಯುತರುಗಳಾದ: ರಮೇಶ್ ಬಾಬು ಮತ್ತು ಕಾಂತರಾಜು(ಬಿಎಂಎಲ್)** ಇವರುಗಳು "ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯಗಳನ್ನು" (CTE) ಉನ್ನತ ಶಿಕ್ಷಣ ಇಲಾಖೆಗೆ ಹಸ್ತಾಂತರಿಸುವ ಬದಲು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿಯೇ ಮುಂದುವರೆಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**